# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1083
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 22.09.2022
ಉತ್ತರಿಸುವ ಸಚಿವರು : ಮಾನ್ಯ ಜಲಸಂಪನ್ಮೂಲ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಕಾರಂಜಾ ಅಣೆಕಟ್ಟು ವ್ಯಾಪ್ತಿಯಲ್ಲಿ ಮುಳುಗಡೆಯಾಗಿರುವ ಜಮೀನುಗಳಿಗೆ ಸಮರ್ಪಕವಾದ ಪರಿಹಾರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೀದರ್ ಜಿಲ್ಲೆಯ ಕಾರಂಜಾ ಅಣೆಕಟ್ಟು ವ್ಯಾಪ್ತಿಯಲ್ಲಿ ಮುಳುಗಡೆಯಾಗಿರುವ ಜಮೀನುಗಳಿಗೆ ಭೂಸ್ವಾಧೀನ ಕಾಯ್ದೆ ಪ್ರಕಾರ ಸಮರ್ಪಕವಾದ ಪರಿಹಾರ ಧನ ಈಗಾಗಲೇ ಭೂಮಾಲೀಕರಿಗೆ ನೀಡಲಾಗಿದೆ. |
| (ಆ) | ನ್ಯಾಯಾಲಯದಲ್ಲಿ ದಾವೆ ಹೂಡಿದ ಜಮೀನಿನ ರೈತರಿಗೆ ಒಂದು ರೀತಿಯ ಪರಿಹಾರ ಹಾಗೂ ನ್ಯಾಯಾಲಯದಲ್ಲಿ ದಾವೆ ಹೂಡದಿರುವ ಜಮೀನಿನ ರೈತರಿಗೆ ಕಡಿಮೆ ಪರಿಹಾರ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನ್ಯಾಯಾಲಯಲ್ಲಿ ದಾವೆ ಹೂಡಿದ ಜಮೀನಿನ ರೈತರಿಗೆ ಮಾನ್ಯ ನ್ಯಾಯಾಲಯದ ಆದೇಶದಂತೆ ಪರಿಹಾರ ಹಣ ಪಾವತಿಸಲಾಗಿದೆ ಹಾಗೂ ನ್ಯಾಯಾಲಯದಲ್ಲಿ ದಾವೆ ಹೂಡದಿರುವ ಜಮೀನಿನ ರೈತರು ಭೂಸ್ವಾಧೀನ ಕಾಯ್ದೆ ಕಲಂ 28 (ಎ) ರಡಿ ಅರ್ಜಿ ಸಲ್ಲಿಸಿದವರಿಗೆ ನ್ಯಾಯಾಲಯದ ಆದೇಶದಂತೆ ಪರಿಹಾರ ಧನ ಪಾವತಿಸಲಾಗಿದೆ. |
| ಇ) | ಹಾಗಾದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡು ಕ್ರಮಗಳೇನು; (ವಿವರ ನೀಡುವುದು) | ನ್ಯಾಯಾಲಯಲ್ಲಿ ದಾವೆ ಹೂಡದಿರುವ ಜಮೀನಿನ ರೈತರಿಗೆ ಹಾಗೂ ಭೂಸ್ವಾಧೀನ ಕಾಯ್ದೆ ರಡಿ ನಿಗಧಿತ ಅವಧಿಯಲ್ಲಿ 18 (1) ಮತ್ತು ಕಲಂ 28 (ಎ) ರಡಿ 90 ದಿವಸದೊಳಗೆ ಅರ್ಜಿ ಸಲ್ಲಿಸದೇ ಇರುವ ರೈತರಿಗೆ ಹೆಚ್ಚುವರಿ ಪರಿಹಾರ ಧನ ನೀಡಲು ಅವಕಾಶವಿರುವುದಿಲ್ಲ. |
| ಈ) | ಯಾವ ಕಾಲಮಿತಿಯಲ್ಲಿ ನ್ಯಾಯಾಲಯದಲ್ಲಿ ದಾವೆ ಹೂಡಿದ ಜಮೀನಿನ ರೈತರಿಗೆ ನೀಡಲಾದ ಪರಿಹಾರದ ಮಾದರಿಯಲ್ಲಿ ಎಲ್ಲರಿಗೂ ಸಮಪ್ರಮಾಣದಲ್ಲಿ ಪರಿಹಾರ ನೀಡಲಾಗುವುದು? | |

**ಜಸಂಇ 182 ಎಂಎಲ್ಎ 2022**

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು